Akashvani : Bengaluru
National Bulletin In Kannada
03.09.2025 : 7.35am

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಸೆಮಿಕಾನ್ ಇಂಡಿಯಾ ೨೦೨೫; ಪ್ರಧಾನಿ ನರೇಂದ್ರ ಮೋದಿ ಇಂದು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳೊಂದಿಗೆ ದುಂಡು ಮೇಜಿನ ಸಭ

೨. ಸರಕು ಮತ್ತು ಸೇವಾ ತೆರಿಗೆ-ಜಿಎಸ್‌ಟಿ ಮಂಡಳಿಯ ೫೬ನೇ ಸಭೆ ಸಚಿವೆ ನಿರ್ಮಲಾ ಸೀತಾರಾಮನ್ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿಂದು ಆರಂಭ

೩. ಪ್ರಾಥಮಿಕ ಶಾಲೆಗಳ ಜೊತೆ ಅಂಗನವಾಡಿ ಕೇಂದ್ರಗಳ ಸಂಯೋಜನೆ ಮಾರ್ಗಸೂಚಿ ಇಂದು ಪ್ರಕಟ

೪. ಇಂದಿನಿಂದ ೨ ದಿನಗಳ ರಾಷ್ಟ್ರೀಯ ಆಯುಷ್ ಮಿಷನ್ ಮತ್ತು ರಾಜ್ಯಗಳಲ್ಲಿ ಸಾಮರ್ಥ್ಯವೃದ್ಧಿ ಕುರಿತ ಶೃಂಗಸಭೆ

೫. ಏಷ್ಯಾ ಕಪ್ ಹಾಕಿ ಟೂರ್ನಿ: ಸೂಪರ್-೪ರ ಹಂತದ ಪಂದ್ಯದಲಿ ಭಾರತ-ದಕ್ಷಿಣ ಕೊರಿಯಾ ಸೆಣಸು

><><><*><><><

ಪ್ರಧಾನಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ಸೆಮಿಕಾನ್ ಇಂಡಿಯಾ ೨೦೨೫ರಲ್ಲಿ ನಡೆಯಲಿರುವ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ದುಂಡುಮೇಜಿನ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಭಾರತದ ಸೆಮಿಕಂಡಕ್ಟರ್ ಪೂರಕ ವ್ಯವಸ್ಥೆ ಮತ್ತು ಅದರ ಬೆಳವಣಿಗೆ ಮತ್ತು ಅಭಿವೃದ್ಧಿಯನ್ನು ಚರ್ಚಿಸಲು ಸಿಇಒ ದುಂಡುಮೇಜಿನ ಸಭೆಯು ಉದ್ಯಮದ ನಾಯಕರನ್ನು ಒಗೂಡಿಸುತ್ತದೆ. ಈ ವೇಳೆ ಪ್ರಧಾನಿ ಅವರು ಜಗತ್ತಿನ ನಾನಾ ಭಾಗಗಳ ಪ್ರಮುಖ ಸಿಇಒಗಳೊಂದಿಗೆ ಸಂವಾದ ನಡೆಸಲಿದ್ದಾರೆ. ೩ ದಿನಗಳ ಸೆಮಿಕಾನ್ ಇಂಡಿಯಾ ೨೦೨೫ ಸಮ್ಮೇಳನಕ್ಕೆ ನವದೆಹಲಿಯ ಯಶೋಭೂಮಿಯಲ್ಲಿ ಪ್ರಧಾನಿ ನಿನ್ನೆ ಚಾಲನೆ ನೀಡಿದ್ದರು. ಜಾಗತಿಕ ಸೆಮಿಕಂಡಕ್ಟರ್ ಪೂರೈಕೆ ಸರಣಿಯಲ್ಲಿ ಭಾರತವನ್ನು ವಿಶ್ವಾಸಾರ್ಹ ಪಾಲುದಾರನನ್ನಾಗಿ ಮಾಡುವ ಗುರಿಯನ್ನು ಈ ಸಮ್ಮೇಳನ ಹೊಂದಿದೆ.

ಈ ವೇಳೆ ಪ್ರಧಾನಿ, ಮುಂಬರುವ ವರ್ಷಗಳಲ್ಲಿ ೧ ಟ್ರಿಲಿಯನ್ ಡಾಲರ್‌ಗಳನ್ನು ಮೀರುವ ನಿರೀಕ್ಷೆಯಿರುವ ಜಾಗತಿಕ ಸೆಮಿಕಂಡಕ್ಟರ್ ಮಾರುಕಟ್ಟೆಯಲ್ಲಿ ಭಾರತವು ಮಹತ್ವದ ಪಾಲುದಾರನಾಗುವ ಸಾಮರ್ಥ್ಯವಿದೆ. ಆ ಪ್ರಕ್ರಿಯೆಗಳನ್ನು ಸುಗಮಗೊಳಿಸಲು, ಕಾನೂನುಗಳ ಪಾಲನೆ ತಗ್ಗಿಸಲು ಮತ್ತು ಹೂಡಿಕೆದಾರರಿಗೆ ಪ್ಲಗ್-ಅಂಡ್-ಪ್ಲೇ ಮೂಲಸೌಕರ್ಯವನ್ನು ಒದಗಿಸಲು ಸರ್ಕಾರ ಪ್ರಯತ್ನಿಸುತ್ತಿದೆ ಎಂದರು. ಭಾರತದ ಸೆಮಿಕಂಡಕ್ಟರ್ ವಲಯದಲ್ಲಿ ಪ್ರತಿಭೆ ಮತ್ತು ನಾವೀನ್ಯತೆ ಪೂರಕ ವ್ಯವಸ್ಥೆಯನ್ನು ಬಳಸಿಕೊಳ್ಳುವಂತೆ ಯುವ ಉದ್ಯಮಿಗಳು ಮತ್ತು ನವೋದ್ಯಮಿಗಳಿಗೆ ಪ್ರಧಾನಿ ಕರೆ ನೀಡಿದರು.

><><>*><><><

ಸರಕು ಮತ್ತು ಸೇವಾ ತೆರಿಗೆ-ಜಿಎಸ್‌ಟಿ ಮಂಡಳಿಯ ೫೬ನೇ ಸಭೆ ನವದೆಹಲಿಯಲ್ಲಿಂದು ಆರಂಭವಾಗಲಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಎರಡು ದಿನಗಳ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ತೆರಿಗೆ ದರಗಳ ಏಕರೂಪಗೊಳಿಸುವಿಕೆ ಮತ್ತು ಪಾಲನೆಯ ಸರಳೀಕರಣ ಸೇರಿ ಭಾರತದ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳ ಕುರಿತು ಮಂಡಳಿಯು ಚರ್ಚಿಸುವ ನಿರೀಕ್ಷೆಯಿದೆ. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಈ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿ ಸರಕು ಮತ್ತು ಸೇವಾ ತೆರಿಗೆ ರಾಷ್ಟ್ರಕ್ಕೆ ಹೇಗೆ ಪ್ರಯೋಜನವನ್ನು ನೀಡಿದೆ ಎಂಬುದನ್ನು ಎತ್ತಿ ತೋರಿಸಿದರು. ಅವರು ಜಿಎಸ್‌ಟಿ ಅಡಿಯಲ್ಲಿ ಮುಂದಿನ ಪೀಳಿಗೆಯ ಸುಧಾರಣೆಗಳ ಮಹತ್ವ ಒತ್ತಿ ಹೇಳಿದ್ದರು, ಇದು ಸಾಮಾನ್ಯ ಜನರು, ರೈತರು, ಮಧ್ಯಮ ವರ್ಗ ಮತ್ತು ಎಂಎಸ್‌ಎಂಇಗಳಿಗೆ ಪರಿಹಾರವನ್ನು ತರುತ್ತದೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳನ್ನು ದೀಪಾವಳಿಯಂದು ಅನಾವರಣಗೊಳಿಸಲಾಗುವುದು, ಅಗತ್ಯ ವಸ್ತುಗಳ ಮೇಲಿನ ತೆರಿಗೆಗಳನ್ನು ಕಡಿಮೆ ಮಾಡುತ್ತದೆ ಮತ್ತು ಸ್ಥಳೀಯ ಮಾರಾಟಗಾರರು ಮತ್ತು ಗ್ರಾಹಕರಿಗೆ ಪರಿಹಾರವನ್ನು ಒದಗಿಸುತ್ತದೆ.

><><>*><><><

ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ದೆಹಲಿಗೆ ನಿನ್ನೆ ಸಿಂಗಾಪುರದ ಪ್ರಧಾನಿ ಲಾರೆನ್ಸ್ ವಾಂಗ್ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದರು. ಉಭಯ ನಾಯಕರು ಸಮಗ್ರ ಕಾರ್ಯತಾಂತ್ರಿಕ ಬಲವರ್ಧನೆ ಸೇರಿದಂತೆ ವ್ಯಾಪಾರ ಮತ್ತು ಹೂಡಿಕೆ, ಫಿಂಟೆಕ್, ಕೌಶಲ್ಯಾಭಿವೃದ್ಧಿ, ಸುಸ್ಥಿರತೆ, ಆರೋಗ್ಯ, ರಕ್ಷಣೆ ಮತ್ತು ಸಂಪರ್ಕ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಮಾಲೋಚನೆ ನಡೆಸಿದರು. ಮಾತುಕತೆ ವೇಳೆ ಉಭಯ ನಾಯಕರು ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಬಲವರ್ಧನೆಗೊಳಿಸಲು ಸಮ್ಮತಿಸಿದರು. ಭಾರತ- ಸಿಂಗಾಪುರ ನಡುವಿನ ರಾಜತಾಂತ್ರಿಕ ಸಂಬಂಧಗಳು ೬೦ ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಸಿಂಗಾಪುರದ ಪ್ರಧಾನಿ ಭಾರತ ಪ್ರವಾಸವನ್ನು ಕೈಗೊಂಡಿದ್ದು, ಉಭಯ ದೇಶಗಳು ಪಾಲುದಾರಿಕೆ ಬಲವರ್ಧನೆಗೆ ಪರಸ್ಪರ ಬದ್ಧತೆಯನ್ನು ವ್ಯಕ್ತಪಡಿಸಿವೆ.

><><>*><><><

ಶಿಕ್ಷಣ ಸಚಿವಾಲಯದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಹಯೋಗದೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು ಅಂಗನವಾಡಿ ಕೇಂದ್ರಗಳನ್ನು ಪ್ರಾಥಮಿಕ ಶಾಲೆಗಳೊಂದಿಗೆ ಅದೇ ಸ್ಥಳಗಳಲ್ಲಿ ಸಂಯೋಜಿಸುವ ಕುರಿತ ಮಾರ್ಗಸೂಚಿಗಳನ್ನು ಇಂದು ನವದೆಹಲಿಯ ವಿಜ್ಞಾನ ಭವನದಲ್ಲಿ ಬಿಡುಗಡೆ ಮಾಡಲಿದೆ. ಈ ಕಾರ್ಯಕ್ರಮದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವೆ ಅನ್ನಪೂರ್ಣ ದೇವಿ ಮತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಹಿರಿಯ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತರು, ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ಎರಡೂ ಇಲಾಖೆಗಳ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಒಂದೇ ಸ್ಥಳದಲ್ಲಿರುವ ಅಂಗನವಾಡಿಗಳು ಮತ್ತು ಶಾಲೆಗಳು ಸೇರಿದಂತೆ ಸಂಯೋಜಿತ ಮಾದರಿಗಳ ಮೂಲಕ ಆರಂಭಿಕ ಬಾಲ್ಯದ ಆರೈಕೆ ಮತ್ತು ಶಿಕ್ಷಣದ ಮಹತ್ವವನ್ನು ಮಾರ್ಗಸೂಚಿಗಳು ಒತ್ತಿ ಹೇಳುತ್ತವೆ. ೨.೯ ಲಕ್ಷಕ್ಕೂ ಹೆಚ್ಚು ಅಂಗನವಾಡಿ ಕೇಂದ್ರಗಳು ಈಗಾಗಲೇ ಶಾಲೆಗಳೊಂದಿಗೆ ಸ್ಥಳವನ್ನು ಹಂಚಿಕೊಂಡಿವೆ. ಈ ಮಾರ್ಗಸೂಚಿಗಳು ಸದ್ಯ ಅಗತ್ಯವಿರುವ ಕಾರ್ಯಾಚರಣೆಯ ಸ್ಪಷ್ಟತೆಯನ್ನು ಒದಗಿಸಲಿವೆ ಹಾಗೂ

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಮಾದರಿಗಳನ್ನು ಪರಿಣಾಮಕಾರಿಯಾಗಿ ಮೇಲ್ದರ್ಜೆಗೇರಿಸಲು ಅನುವು ಮಾಡಿಕೊಡಲಿವೆ.

><><><*><><><

ಆಯುಷ್ ಸಚಿವಾಲಯವು ನವದೆಹಲಿಯ ಸರಿತಾ ವಿಹಾರ್ ನಲ್ಲಿರುವ ಅಖಿಲ ಭಾರತ ಆಯುರ್ವೇದ ಸಂಸ್ಥೆ ಇಂದು ಮತ್ತು ನಾಳೆ "ರಾಷ್ಟ್ರೀಯ ಆಯುಷ್ ಮಿಷನ್ ಮತ್ತು ರಾಜ್ಯಗಳಲ್ಲಿ ಸಾಮರ್ಥ್ಯ ವೃದ್ಧಿ" ಕುರಿತು ಎರಡು ದಿನಗಳ ವಿಭಾಗೀಯ ಶೃಂಗಸಭೆಯ ಆಯೋಜಿಸಿದೆ.  ಆಯುಷ್ ಖಾತೆ ರಾಜ್ಯ ಸಚಿವ ಪ್ರತಾವ್ ಜಾಧವ್ ಶೃಂಗಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಶೃಂಗಸಭೆಯು ರಾಜ್ಯ/ಕೇಂದ್ರಾಳಿತ ಪ್ರದೇಶಗಳ ಅಧಿಕಾರಿಗಳಿಂದ ಪಡೆದ ನಿರ್ದಿಷ್ಟ ರಾಜ್ಯ ಟಿಪ್ಪಣಿಗಳು ಮತ್ತು ಪ್ರತಿಕ್ರಿಯೆ ಟಿಪ್ಪಣಿಗಳ ಕುರಿತು ವಿವರವಾದ ಚರ್ಚೆಗಳಿಗೆ ಒಂದು ವೇದಿಕೆ ಒದಗಿಸುವ ಗುರಿಯನ್ನು ಹೊಂದಿದೆ. ಇದು ತಳಮಟ್ಟದ ಮಟ್ಟದ ಒಳನೋಟಗಳನ್ನೂ ಸಹ ಒಳಗೊಂಡಿರಲಿದೆ. ಆಯುರ್ವೇದ, ಯೋಗ ಮತ್ತು ನ್ಯಾಚುರೋಪತಿ, ಯುನಾನಿ, ಸಿದ್ಧ, ಸೋವಾ ರಿಗ್ಪಾ ಮತ್ತು ಹೋಮಿಯೋಪತಿ ವ್ಯವಸ್ಥೆಗಳನ್ನು ಸಂಯೋಜಿಸುವ ಮೂಲಕ ಸಮಗ್ರ ಆರೋಗ್ಯ ರಕ್ಷಣೆ ಉತ್ತೇಜಿಸುವ ಪ್ರಮುಖ ಕಾರ್ಯಕ್ರಮವಾದ ರಾಷ್ಟ್ರೀಯ ಆಯುಷ್ ಮಿಷನ್ ಅನ್ನು ಬಲವರ್ಧನೆಗೊಳಿಸಲು ಮತ್ತು ಕಾರ್ಯತಂತ್ರಿಕವಾಗಿ ವಿಸ್ತರಿಸಲು ಉದ್ದೇಶಿಸಲಾಗಿದೆ. ನೀತಿ ಆಯೋಗ, ಶೃಂಗಸಭೆಗಳಿಗೆ ಆರು ವಿಷಯಾಧಾರಿತ ವಲಯಗಳನ್ನು ಗುರುತಿಸಿದೆ.  "ರಾಷ್ಟ್ರೀಯ ಆಯುಷ್ ಮಿಷನ್ ಮತ್ತು ರಾಜ್ಯಗಳಲ್ಲಿನ ಸಾಮರ್ಥ್ಯ ವೃದ್ಧಿ" ಯನ್ನು ಆರನೇ ಮತ್ತು ಅಂತಿಮ ವಿಷಯವಾಗಿ ಆಯ್ಕೆ ಮಾಡಲಾಗಿದೆ.

><><><*><><><

೨೦೭೦ರ ವೇಳೆಗೆ ಭಾರತವನ್ನು ಇಂಗಾಲ-ತಟಸ್ಥ ರಾಷ್ಟ್ರವನ್ನಾಗಿ ಮಾಡುವ ಗುರಿಯನ್ನು ಪ್ರಧಾನಿ ನರೇಂದ್ರ ಮೋದಿ ಹೊಂದಿರುವುದಾಗಿ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ೨೦ನೇ ಜಾಗತಿಕ ಸುಸ್ಥಿರತೆ ಸಮ್ಮೇಳನದಲ್ಲಿ ಮಾತನಾಡಿದ ಅವರು, ಹವಾಮಾನ ಬದಲಾವಣೆ ಮತ್ತು ಜಾಗತಿಕ ತಾಪಮಾನದಲ್ಲಿ ಹೆಚ್ಚಳ, ಭವಿಷ್ಯದ ಪೀಳಿಗೆಗೆ ದೊಡ್ಡ ಸವಾಲಾಗಿದೆ. ಯಾವುದೇ ರಾಷ್ಟ್ರ ಅಥವಾ ಸಮಾಜದ ಅಭಿವೃದ್ಧಿಗೆ ನೈತಿಕತೆ, ಆರ್ಥಿಕತೆ ಮತ್ತು ಜೈವಿಕ ವ್ಯವಸ್ಥೆಯ ಜೊತೆಗೆ ಪರಿಸರ ಸಂರಕ್ಷಣೆ ಅತ್ಯಂತ ಪ್ರಮುಖವಾಗಿದೆ ಎಂದು ತಿಳಿಸಿದರು.

><><><*><><><

ಬಿಹಾರದ ರಾಜ್‌ಗಿರ್‌ನಲ್ಲಿ ನಡೆಯುತ್ತಿರುವ ಏಷ್ಯಾ ಕಪ್ ಹಾಕಿ ಚಾಂಪಿಯನ್‌ಷಿಪ್‌ನಲ್ಲಿಂದು ನಡೆಯಲಿರುವ ಸೂಪರ್-೪ರ ಹಂತದ ತಮ್ಮ ಮೊದಲ ಪಂದ್ಯದಲ್ಲಿ ಭಾರತ ತಂಡದ ಆಟಗಾರರು ಪ್ರಬಲ ದಕ್ಷಿಣ ಕೊರಿಯಾ ತಂಡವನ್ನು ಎದುರಿಸಲಿದ್ದಾರೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಹರ್ಮನ್ ಪ್ರೀತ್ ನಾಯಕತ್ವದ ಭಾರತ ತಂಡ 'ಎ' ಗುಂಪಿನಿಂದ ಅಗ್ರಸ್ಥಾನದ ತಂಡವಾಗಿ ಈ ಹಂತಕ್ಕೆ ಪ್ರವೇಶ ಪಡೆದಿದೆ. ಗುಂಪಿನಲ್ಲಿ ತಾನಾಡಿದ ಮೂರೂ ಪಂದ್ಯಗಳಲ್ಲಿ ಕ್ರಮವಾಗಿ ಚೈನಾ, ಜಪಾನ್ ಹಾಗು ಕಜಕಿಸ್ತಾನ ತಂಡವನ್ನು ಪರಾಭವಗೊಳಿಸಿ ಅಜೇಯ ಮುನ್ನಡೆಯುತ್ತಿದೆ. ಹಾಗಾಗಿ, ದಕ್ಷಿಣ ಕೊರಿಯಾ ವಿರುದ್ಧವೂ ಉತ್ತಮ ಪ್ರದರ್ಶನ ನೀಡಿ ನಿರೀಕ್ಷಿತ ಗೆಲುವು ತನ್ನದಾಗಿಸಿಕೊಳ್ಳುವ ವಿಶ್ವಾಸ ಹೊಂದಿದೆ.

><><><*><><><